ದಿನಾಂಕ: 19.12.2020 ರಂದು ಮಧ್ಯಾಹ್ನ 3.00 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ **ಶ್ರೀ ಲಿಂಗಣ್ಣ ಗುಂಡಳ್ಳಿ**, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀ ನಾಗರಾಜ್.ಕೆ.ವಿ. ಸಹಾಯಕ ಅಭಿಯಂತರರು, ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.
3. ಶ್ರೀ ಆನಂದ್, ಸಹಾಯಕ ಅಭಿಯಂತರರು , ಬೆಸ್ಕಾಂ,
4. ಶ್ರೀ ಹರೀಶ್ ನಾಯಕ್, ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.
5. ಶ್ರೀ ಮನೋಜ್ ಗೌಡ, ಸಹಾಯಕ ಅಭಿಯಂತರರು, ಯೋಜನೆ [ಪಶ್ಚಿಮ]
6. ಶ್ರೀ ರಾಜಣ್ಣ, ವಿಜಯನಗರ ಸಂಚಾರಿ ಇನ್ಸ್‌ಪೆಕ್ಟರ್,
7. ಶ್ರೀ ಶಿವಕುಮಾರ್ , ಹಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀ ರಮೇಶ್, ಪಶು ಸಂಗೋಪನಾ ಇಲಾಖೆ
9. ಶ್ರೀ ಲೋಕೇಶ್, ಅಸೆಸ್ಸರ್
10. ಶ್ರೀ ರವಿ, ಕಂದಾಯ ಪರಿವೀಕ್ಷಕರು
11. ಶ್ರೀ ಮಂಜುನಾಥ್, ಸಂಚಾರಿ ಪೋಲಿಸ್
12. ಶ್ರೀ ವಿಶಾಲ್, ಮಾರ್ಷಲ್
13. ಶ್ರೀ ಶ್ರೀನಾಥ್, ಅರಣ್ಯ ಇಲಾಖೆ
14. ಶ್ರೀ ಮಹೇಶ್ ಗಾರ್ಬೇಜು ಸೂಪರ್ ವೈಸರ್

ಶ್ರೀ ಸೋಮಶೇಖರ್.ಜಿ.ಎಲ್. ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ತಿಮ್ಮಯ ರಸ್ತೆ, ಅನ್ನಪೂರ್ಣೇಶ್ವರಿ ಹೋಟೆಲ್ ಮುಂಭಾಗದಲ್ಲಿರುವ ಮರದ ಕೊಂಬೆಯನ್ನು ತೆರವುಗೊಳಿಸುವ ಬಗ್ಗೆ ಚರ್ಚಿಸಲಾಗಿತ್ತು. ಅದರಂತೆ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ಎಂದು ಹಾಜರಿದ್ದ ಅರಣ್ಯ ಇಲಾಖೆಯವರಿಗೆ ವಿವರವನ್ನು ಕೇಳಿದರು. ಇದಕ್ಕೆ ಉತ್ತರವಾಗಿ ಹಾಜರಿದ್ದ ಅರಣ್ಯ ಇಲಾಖೆಯ ಶ್ರೀ ಶ್ರೀನಾಥ್ ರವರು ಸದರಿ ಕೊಂಬೆಯನ್ನು ತೆರವುಗೊಳಿಸಲು ಸ್ಥಳೀಯ ಸಾರ್ವಜನಿಕರ ಸಹಿವುಳ್ಳ ಪತ್ರ ನೀಡಿದಲ್ಲಿ ಮೇಲಾಧಿಕಾರಿಗಳಿಗೆ ಸಲ್ಲಿಸಿ, ಅನುಮತಿ ಪಡೆದು ಮರದ ಕೊಂಬೆಯನ್ನು ತೆರವುಗೊಳಿಸಲಾಗುವುದೆಂದು ಸಭೆಗೆ ತಿಳಿಸಿದರು.
2. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ತಿಮ್ಮಯ್ಯ ರಸ್ತೆ ಮತ್ತು ಇತರೆ ಮುಖ್ಯ ರಸ್ತೆಗಳಲ್ಲಿ ಸಣ್ಣ ಹೋಟೆಲ್‌ಗಳನ್ನು ನಡೆಸುವ ಮಾಲೀಕರು ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ದೂರುಗಳು ಬರುತ್ತಿರುವುದರಿಂದ ಆರೋಗ್ಯ ಇಲಾಖೆಯವರು ಸದರಿ ಹೋಟೆಲ್‌ಗಳಿಗೆ ಪರವಾನಿಗೆ ನೀಡಿರುವ ಬಗ್ಗೆ ಮಾಹಿತಿಯನ್ನು ಕೇಳಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಪರಿಶೀಲಿಸಿ ವರದಿಯನ್ನು ನೀಡುವುದಾಗಿ ತಿಳಿಸಿದರು.
3. ಶ್ರೀ ವೆಂಕಟೇಶ್ ವಾರ್ಡ್ ಕಮಿಟಿ ಸದಸ್ಯರು 13ನೇ ಮುಖ್ಯ ರಸ್ತೆ, 3ನೇ ವೈ ಬ್ಲಾಕ್, ಇಲ್ಲಿ ಒಳಚರಂಡಿ ಪೈಪ್‌ಗಳನ್ನು ಅಳವಡಿಸಲು ರಸ್ತೆಯನ್ನು ಕತ್ತರಿಸಿ ಬಹಳ ದಿನ ಕಳೆದರು ರಸ್ತೆಯನ್ನು ದುರಸ್ಥಿಪಡಿಸಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಶ್ರೀ ಹರೀಶ್‌ನಾಯಕ್, ಸಹಾಯಕ ಅಭಿಯಂತರರು, ಬಿ.ಡ್ಬ್ಲ್ಯೂ.ಎಸ್.ಎಸ್.ಬಿ. ರವರು ಕತ್ತರಿಸಿರುವ ರಸ್ತೆಯನ್ನು ವೆಟ್‌ಮಿಕ್ಸ್ ಹಾಕಿ ತಾತ್ಕಾಲಿಕವಾಗಿ ದುರಸ್ಥಿಪಡಿಸಲಾಗುದೆಂದು ತಿಳಿಸಿದರು.
4. ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ತಿಮ್ಮಯ್ಯ ರಸ್ತೆ ಮತ್ತು ಮಂಜುನಾಥನಗರ 1ನೇ ಮುಖ್ಯ ರಸ್ತೆಯಲ್ಲಿ ಪಾದಚಾರಿ ಮಾರ್ಗವನ್ನು ಅಂಗಡಿಯವರು ಅತಿಕ್ರಮಿಸಿಕೊಂಡಿರುವುದರಿಂದ ಸಾರ್ವಜನಿಕರು ಓಡಾಡಲು ಕಷ್ಟಕರವಾಗುತ್ತಿರುತ್ತದೆ ಎಂದು ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಪಾದಚಾರಿ ಮಾರ್ಗವನ್ನು ತೆರವುಗೊಳಿಸಲು ದಿನಾಂಕವನ್ನು ನಿಗಧಿಪಡಿಸಿ, ತೆರವುಗೊಳಿಸುವ ಕಾರ್ಯಾಚರಣೆಯನ್ನು ಕೈಗೊಳ್ಳುವಂತೆ ತಿಳಿಸಿದರು.

**ಪು.ತಿ.ನೋ**

Scanned by CamScanner

5. ಶ್ರೀ ಕೇಶವಮೂರ್ತಿ , ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಬೆಸ್ಕಾಂ ವತಿಯಿಂದ ಕೇಬಲ್ ಅಳವಡಿಸಲು ರಸ್ತೆ ಕತ್ತರಿಸಿ ತುಂಬಾ ದಿನಗಳು ಕಳೆದರು ಸಹ ರಸ್ತೆಯನ್ನು ದುರಸ್ಥಿಪಡಿಸಿರುವುದಿಲ್ಲವೆಂದು ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಶ್ರೀ ಆನಂದ್ , ಸಹಾಯಕ ಅಭಿಯಂತರರು ಈಗಾಗಲೇ ಮಣ್ಣನ್ನು ತೆರವುಗೊಳಿಸುತ್ತಿದ್ದು, ದುರಸ್ಥಿ ಕಾರ್ಯವನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದೆಂದು ಸಭೆಗೆ ತಿಳಿಸಿದರು.
6. ಮಹಾಗಣಪತಿನಗರ 1ನೇ ಮುಖ್ಯ ರಸ್ತೆಯಲ್ಲಿ ಬೆಸ್ಕಾಂ ವತಿಯಿಂದ ಕೇಬಲ್ ಅಳವಡಿಸುವಾಗ ಒಳಚರಂಡಿ ಪೈಪ್‌ಗಳನ್ನು ಹೊಡೆದು ಹಾಕಿರುವುದರಿಂದ ಒಳಚರಂಡಿಯ ನೀರು ರಸ್ತೆಯ ಮೇಲೆ ಹರಿಯುತ್ತಿರುವುದಾಗಿ ಸಾರ್ವಜನಿಕರು ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಈ ವಿಷಯದ ಬಗ್ಗೆ ಮಾತನಾಡುತ್ತಾ, ಸಂಬಂಧಪಟ್ಟ ಎರಡು ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲಿಸಿ, ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು
ವಾರ್ಡ್ ನಂ. 107

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ,] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ/ವಿಜಯನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಪೋಲಿಸ್ ಠಾಣೆ, ರಾಜಾಜಿನಗರ/ಬಸವೇಶ್ವರನಗರ, ರವರ ಮಾಹಿತಿಗಾಗಿ ಸಲ್ಲಿಸಿದೆ.
13. ಅರಣ್ಯಾಧಿಕಾರಿ, ಬಿ.ಬಿ.ಎಂ.ಪಿ. ಪಶ್ಚಿಮ ರವರ ಮಾಹಿತಿಗಾಗಿ ಸಲ್ಲಿಸಿದೆ.

Scanned by CamScanner